Akashvani : Bangalore
Regional Bulletin In Kannada
07.02.2026 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
<><*<><>*><>

ಮುಖ್ಯಾಂಶಗಳು

೧. ರಾಜ್ಯದ ರೈಲ್ವೆ ಯೋಜನೆಗಳಿಗೆ ೭ ಸಾವಿರದ ೭೪೮ ಕೋಟಿ ರೂಪಾಯಿ ಮೀಸಲು, ಶೀಘ್ರದಲ್ಲೇ ಮಂಗಳೂರಿಗೆ 'ವಂದೇ ಭಾರತ್' - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್

೨. ವಿವಿಧ ಇಲಾಖೆಗಳ ಸಚಿವರು, ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಬಜೆಟ್ ಪೂರ್ವಭಾವಿ ಸಭೆ

೩. ರಾಜ್ಯದ ಎಲ್ಲ ರಾಸಾಯನಿಕ ಕಾರ್ಖಾನೆಗಳ ಮೇಲೆ ಹೆಚ್ಚಿನ ನಿಗಾವಣೆ - ಡಾ.ಜಿ.ಪರಮೇಶ್ವರ್

೪. ಗ್ರೇಟರ್ ಬೆಂಗಳೂರು ಪ್ರಾಧಿಕಾರ ಚುನಾವಣೆ ; ಬಿಜೆಪಿ ಮಹತ್ವದ ಸಭೆ

<><*<><>*><>

ಇತ್ತೀಚೆಗೆ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿದ ೨೦೨೬-೨೭ನೇ ಸಾಲಿನ ಕೇಂದ್ರ ಬಜೆಟ್‌ನಲ್ಲಿ ರಾಜ್ಯದಲ್ಲಿನ ರೈಲ್ವೆ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಬಜೆಟ್ ವಿವರ ನೀಡಿದ ಸಚಿವರು, ಈ ಬಾರಿ ರಾಜ್ಯದಲ್ಲಿನ ರೈಲ್ವೆ ಯೋಜನೆಗಳಿಗಾಗಿ ೭ ಸಾವಿರದ ೭೪೮ ಕೋಟಿ ಮೀಸಲಿಡಲಾಗಿದೆ. ಇದು ಹಿಂದಿನ ಯುಪಿಎ ಸರ್ಕಾರಕ್ಕಿಂತ ಶೇಕಡ ೯ರಷ್ಟು ಹೆಚ್ಚಾಗಿದೆ ಎಂದರು. ಅಮೃತ ಭಾರತ್ ಯೋಜನೆಯಡಿ ೬೧ ರೈಲು ನಿಲ್ದಾಣಗಳ ಆಧುನೀಕರಣ, ಹಳಿ ನಿರ್ಮಾಣ, ಬೆಂಗಳೂರು ಉಪನಗರ ರೈಲು ಯೋಜನೆ ಸೇರಿದಂತೆ ಒಟ್ಟಾರೆ ೫೨ ಸಾವಿರದ ೯೫೦ ಕೋಟಿ ರೂಪಾಯಿ ವೆಚ್ಚ ಮಾಡಲಾಗುತ್ತಿದೆ ಎಂದು ತಿಳಿಸಿದರು. ರಾಜ್ಯದಲ್ಲಿ ಅಮೃತ್ ಭಾರತ್ ಯೋಜನೆಯಡಿ ರಾಜ್ಯದಲ್ಲಿನ ೬೧ ನಿಲ್ದಾಣಗಳನ್ನು ಈಗಾಗಲೇ ಪುನರ್ ನಿರ್ಮಾಣ ಮಾಡಲಾಗುತ್ತಿದೆ. ಈ ಪೈಕಿ ೯ ನಿಲ್ದಾಣಗಳು ಈಗಾಗಲೇ ಪೂರ್ಣಗೊಂಡಿವೆ ಎಂದು ಮಾಹಿತಿ ನೀಡಿದರು. ಬಜೆಟ್‌ನಲ್ಲಿ ಘೋಷಿಸಲಾದ ಬೆಂಗಳೂರು-ಚೆನ್ನೈ, ಬೆಂಗಳೂರು-ಹೈದರಾಬಾದ್ ನಡುವಣ ಹೈಸ್ಪೀಡ್ ರೈಲುಗಳಿಂದ ಈ ಮೂರು ನಗರಗಳ ನಡುವಿನ ಪ್ರಯಾಣದ ಸಮಯ ಕಡಿತವಾಗಿದೆ ಎಂದು ಹೇಳಿದರು. ರಾಜ್ಯದಲ್ಲಿ ಸದ್ಯ ೧೨ ಜೋಡಿ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಕಾರ್ಯ ನಿರ್ವಹಿಸುತ್ತಿದ್ದು, ಶೀಘ್ರದಲ್ಲೇ ಮಂಗಳೂರು-ಬೆಂಗಳೂರು ರೈಲು ಆರಂಭವಾಗಲಿದೆ. ಮಂಗಳೂರು-ಬೆಂಗಳೂರು ಮಾರ್ಗದಲ್ಲಿನ ವಿದ್ಯುದ್ದೀಕರಣ ಪೂರ್ಣಗೊಂಡಿದ್ದು, ಸುರಕ್ಷತಾ ಪ್ರಮಾಣಪತ್ರ ದೊರೆತ ಬಳಿಕ ರೈಲು ವೇಳಾಪಟ್ಟಿಯನ್ನು ಶೀಘ್ರದಲ್ಲೇ ಘೋಷಿಸಲಾಗುವುದು ಎಂದು ತಿಳಿಸಿದರು. ಇದು ಇಡೀ ಕರಾವಳಿ ಪ್ರದೇಶವನ್ನು ಸಂಪರ್ಕಿಸುವ ಯೋಜನೆಯಾಗಿದ್ದು, ಒಂದು ರೈಲು ಬೆಂಗಳೂರಿನಿಂದ ಹೊರಡಲಿದ್ದು, ಮತ್ತೊಂದು ರೈಲು ಕರಾವಳಿ ಪ್ರದೇಶದಿಂದ ಹೊರಡಲಿದೆ ಎಂದು ಸಚಿವರು ತಿಳಿಸಿದರು.

ಧ್ವನಿ: ಅಶ್ವಿನಿ ವೈಷ್ಣವ್ ( ೩೫ ಸೆಕೆಂಡ್ಸ್)

<><*<><>*><>

೨೦೨೬-೨೭ನೇ ಸಾಲಿನ ಬಜೆಟ್ ಪೂರ್ವಭಾವಿಯಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದು ವಿವಿಧ ಇಲಾಖೆಗಳ ಸಚಿವರು ಹಾಗೂ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಸಣ್ಣ ಕೈಗಾರಿಕಾ ಇಲಾಖೆ, ಆರೋಗ್ಯ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಗಳ ಸಚಿವರು ಮತ್ತು ಅಧಿಕಾರಿಗಳ ಜೊತೆ ಸಭೆ ನಡೆಸಿ, ಇಲಾಖೆಯ ಅನುದಾನದ ಬೇಡಿಕೆ, ಕಾರ್ಯಕ್ರಮಗಳ ನೀಲನಕ್ಷೆಯ ಮಾಹಿತಿ ಪಡೆದರು. ಸಚಿವರಾದ ಡಾ.ಹೆಚ್. ಸಿ. ಮಹದೇವಪ್ಪ, ದಿನೇಶ್ ಗುಂಡೂರಾವ್, ಶರಣಬಸಪ್ಪ ದರ್ಶನಾಪುರ, ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರೆಡ್ಡಿ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

<><*<><>*><>

ಎಂಎಸ್ಐಎಲ್ ಸರ್ಕಾರಿ ಸಂಸ್ಥೆಯಾಗಿದ್ದು, ಜನರ ಹೂಡಿಕೆಗೆ ಭದ್ರತೆಯನ್ನು ಒದಗಿಸುತ್ತದೆ. ತಮ್ಮ ಹೂಡಿಕೆಯ ಕೇವಲ ಶೇಕಡ ೫ ರಷ್ಟು ಲಾಭ ಪಡೆಯುವ ಸಂಸ್ಥೆ ಜನರ ಆರ್ಥಿಕ ಭದ್ರತೆಗೆ ನೆರವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಎಂಎಸ್ಐಎಲ್ ಚಿಟ್ಸ್‌ನ ಹೊಸ ಸಾಫ್ಟ್‌ವೇರ್ ಹಾಗೂ ಆಪ್‌ಅನ್ನು ಬಿಡುಗಡೆಗೊಳಿಸಿ ಮಾತನಾಡಿದ ಮುಖ್ಯಮಂತ್ರಿ, ಉಳಿತಾಯದ ಸಂಸ್ಕೃತಿ ಅತ್ಯವಶ್ಯವಾಗಿದ್ದು, ತುರ್ತು ಸಂದರ್ಭದಲ್ಲಿ ಉಳಿತಾಯದ ಹಣ ನೆರವಿಗೆ ಬರುತ್ತದೆ. ಎಂಎಸ್ಐಎಲ್ ಸರ್ಕಾರಿ ಸಂಸ್ಥೆ ಹಲವು ದಶಕಗಳಿಂದ ಜನರ ವಿಶ್ವಾಸಕ್ಕೆ ಪಾತ್ರವಾಗಿದೆ ಎಂದರು. ಹೂಡಿಕೆ ಹಣ ಸುರಕ್ಷಿತವಾಗಿರುವುದು ಅತ್ಯಂತ ಅಗತ್ಯವಾಗಿದ್ದು, ಎಂಎಸ್ಐಎಲ್‌ನ ಚಿಟ್ ಫಂಡ್ ಈ ಭರವಸೆಯನ್ನು ನೀಡುತ್ತದೆ. ಎಂಎಸ್ಐಎಲ್‌ನ ಚಿಟ್ ಫಂಡ್ ವ್ಯವಹಾರದಲ್ಲಿ ಗ್ರಾಹಕರಿಗೆ ಅನುಕೂಲವಾಗುವಂತೆ ಆಧುನಿಕ ತಂತ್ರಾಂಶವನ್ನು ಇಂದು ಲೋಕಾರ್ಪಣೆಗೊಳಿಸಲಾಗಿದೆ ಎಂದು ತಿಳಿಸಿದರು. ಕಿರು ಫೈನಾನ್ಸ್ ಕಂಪನಿಗಳ ಕಿರುಕುಳದಿಂದ ಜನರನ್ನು ರಕ್ಷಿಸಲು "ಕಿರು ಸಾಲ ಮತ್ತು ಸಣ್ಣ ಸಾಲ ಅಧ್ಯಾದೇಶ ೨೦೨೫" ಕಾಯ್ದೆಯನ್ನು ಜಾರಿಮಾಡಲಾಗಿದೆ ಎಂದು ಹೇಳಿದರು.

<><*<><>*><>

ರಾಜ್ಯದ ಎಲ್ಲಾ ರಾಸಾಯನಿಕ ಕಾರ್ಖಾನೆಗಳ ಮೇಲೆ ಹೆಚ್ಚಿನ ನಿಗಾ ಇಡುವಂತೆ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಗೃಹ ಸಚಿವ ಡಾ. ಪರಮೇಶ್ವರ್ ತಿಳಿಸಿದರು. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಷ್ಟ್ರೀಯ ಮಾದಕ ದ್ರವ್ಯ ನಿಯಂತ್ರಣ ಘಟಕ ಎನ್‌ಸಿಬಿ ಇತ್ತೀಚೆಗೆ ಮೈಸೂರಿನಲ್ಲಿ ನಡೆಸಿದ ದಾಳಿ ವೇಳೆ ಯಾವುದೇ ಮಾದಕ ವಸ್ತು ಪತ್ತೆಯಾಗಿಲ್ಲ ಎಂದರು. ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಕುರಿತ ಗೊಂದಲ ವಿಚಾರಕ್ಕೆ ಪ್ರತಿಕ್ರಿಯಿಸಿದ ಡಾ. ಪರಮೇಶ್ವರ್, ಹೈಕಮಾಂಡ್ ಎಲ್ಲ ಬೆಳವಣಿಗೆಗಳನ್ನು ಗಮನಿಸುತ್ತಿದೆ. ಪಕ್ಷದಲ್ಲಿ ಯಾವುದೇ ಗೊಂದಲ ಇಲ್ಲ ಎಂದು ಹೇಳಿದರು.

<><*<><>*><>

ಗ್ರೇಟರ್ ಬೆಂಗಳೂರು ಪ್ರಾಧಿಕಾರ ಚುನಾವಣೆ ಹಿನ್ನೆಲೆಯಲ್ಲಿ ರಾಜ್ಯ ಬಿಜೆಪಿ ಕಾರ್ಯಾಲಯದಲ್ಲಿ ಇಂದು ಮಹತ್ವದ ಸಭೆ ನಡೆಯಿತು. ಚುನಾವಣೆಗಾಗಿ ವರಿಷ್ಠರಿಂದ ನೇಮಕವಾಗಿರುವ ರಾಮ್ ಮಾಧವ್, ಸತೀಶ್ ಪೂನಿಯಾ, ಸಂಜಯ್ ಉಪಾಧ್ಯಾಯ ಹಾಗೂ ಪಕ್ಷದ ಶಾಸಕರು, ಸಂಸದರು ಸಭೆಯಲ್ಲಿ ಪಾಲ್ಗೊಂಡರು. ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ಐದು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಡೆಯುವ ಚುನಾವಣೆಗೆ ಬಿಜೆಪಿ ಸಜ್ಜಾಗಿದೆ. ಅಭ್ಯರ್ಥಿ ಆಯ್ಕೆ ಸಂಬಂಧ ಫೆಬ್ರವರಿ ೨೮ ಹಾಗೂ ಮಾರ್ಚ್ ೧ ರಂದು ಸ್ಥಳೀಯ ಮಟ್ಟದಲ್ಲಿ ಪಕ್ಷದ ನಾಯಕರೊಂದಿಗೆ ಸಭೆ ನಡೆಸಲಾಗುವುದು ಎಂದು ತಿಳಿಸಿದರು. ಜೆಡಿಎಸ್ ಜೊತೆಗೆ ಮೈತ್ರಿ ಮಾಡಿಕೊಳ್ಳುವ ಸಂಬಂಧ ಪಕ್ಷದ ಹಿರಿಯ ನಾಯಕರನ್ನೊಳಗೊಂಡ ತಂಡವನ್ನು ರಚಿಸಿ, ಜೆಡಿಎಸ್ ನಾಯಕರೊಂದಿಗೆ ಸಮಾಲೋಚನೆ ನಡೆಸಲಾಗುವುದು ಎಂದು ಹೇಳಿದರು.

<><*<><>*><>

ಗ್ರಾಮೀಣ ಜನರ ಜೀವನದಲ್ಲಿ ಗುಣಾತ್ಮಕ ಬದಲಾವಣೆ ತರುವಲ್ಲಿ ವಿಬಿ ಜಿ ರಾಮ್ ಜಿ ಯೋಜನೆ ಮಹತ್ತರ ಪಾತ್ರ ವಹಿಸಲಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ಗದಗದಲ್ಲಿಂದು ನಡೆದ ವಿಕಸಿತ ಭಾರತ ಜಿ-ರಾಮ್-ಜಿ ಯೋಜನೆಯ ಅನುಷ್ಠಾನ ಹಾಗೂ ಜನಜಾಗೃತಿ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಈ ಯೋಜನೆ ಕುರಿತು ಗ್ರಾಮೀಣ ಭಾಗದ ಜನರಿಗೆ ಸಂಪೂರ್ಣ ಮಾಹಿತಿ ತಲುಪಿಸುವ ಕಾರ್ಯವಾಗಬೇಕಿದೆ ಎಂದರು.

<><*<><>*><>

ಇದೆ ೯ರಿಂದ ಮೆಟ್ರೋ ಪ್ರಯಾಣ ದರ ಹೆಚ್ಚಳ ಇಲ್ಲ ಎಂದು ಬೆಂಗಳೂರು ದಕ್ಷಿಣ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ತಿಳಿಸಿದ್ದಾರೆ.  ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಅವರು ಮಾಹಿತಿ ಹಂಚಿಕೊಂಡಿದ್ದು, ಕೇಂದ್ರ ನಗರಾಭಿವೃದ್ಧಿ ಸಚಿವ ಮನೋಹರ್ ಲಾಲ್ ಖಟ್ಟರ್ ಅವರೊಂದಿಗೆ ಮಾತುಕತೆ ನಡೆಸಿದ್ದು, ರಾಜ್ಯಸರ್ಕಾರದ ಉದ್ದೇಶಿತ ಮೆಟ್ರೋ ದರ ಏರಿಕೆಯ ವಿರುದ್ಧ ಮಧ್ಯ ಪ್ರವೇಶಿಸುವಂತೆ ಕೋರಲಾಗಿತ್ತು.  ಇದಕ್ಕೆ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಮೆಟ್ರೋ ದರ ಹೆಚ್ಚಳ ಮಾಡದಂತೆ ಸೂಚಿಸಿರುವುದಾಗಿ ತಿಳಿಸಿದ್ದಾರೆ.

<><*<><>*><>

ದೆಹಲಿ ಕರ್ನಾಟಕ ಸಂಘವು ನೀಡುವ ಪ್ರತಿಷ್ಠಿತ ಡಾ.ಶಿವರಾಮ ಕಾರಂತ ಪ್ರಶಸ್ತಿಗೆ ಕೆರೆಮನೆ ಶಿವಾನಂದ ಹೆಗಡೆ ಭಾಜನರಾಗಿದ್ದಾರೆ. ಈ ಬಗ್ಗೆ ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡ ಕೆರೆಮನೆ ಶಿವಾನಂದ ಹೆಗಡೆ, ಪ್ರಶಸ್ತಿ ಯಕ್ಷಗಾನದ ಇಡೀ ವಲಯಕ್ಕೆ ದೊರಕಿದ ದೊಡ್ಡ ಗೌರವವಾಗಿದೆ. ಈ ಪ್ರಶಸ್ತಿಯನ್ನು ಅತ್ಯಂತ ವಿನಮ್ರವಾಗಿ ಸ್ವೀಕರಿಸುತ್ತೇನೆ ಎಂದರು.

ಧ್ವನಿ : ಶಿವಾನಂದ ಹೆಗಡೆ ( ೨೫ ಸೆಕೆಂಡ್ಸ್)

<><*<><>*><>

ರಾಮನಗರದ ಜಾನಪದ ಲೋಕದಲ್ಲಿ ಕರ್ನಾಟಕ ಜಾನಪದ ಪರಿಷತ್ತು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಆಯೋಜಿಸಲಾಗಿದ್ದ ವಿದ್ಯಾರ್ಥಿ ಜಾನಪದ ಲೋಕೋತ್ಸವ-೨೦೨೬ಕ್ಕೆ ಚಲನಚಿತ್ರ ನಿರ್ದೇಶಕ ಡಾ.ಟಿ.ಎಸ್.ನಾಗಾಭರಣ ಇಂದು ಚಾಲನೆ ನೀಡಿದರು.  ಬಳಿಕ ಮಾತನಾಡಿದ ಅವರು, ವ್ಯಕ್ತಿತ್ವ ಮತ್ತು ಸಂಸ್ಕಾರವನ್ನು ರೂಪಿಸುವ ಜಾನಪದ ಲೋಕಕ್ಕೆ ಅನುದಾನ ಹೆಚ್ಚಾಗಬೇಕಾಗಿದೆ. ಸರ್ಕಾರವಷ್ಟೇ ಅಲ್ಲದೇ ಕಾರ್ಪೋರೇಟ್ ಸಂಸ್ಥೆಗಳೂ ಸಹ ಅನುದಾನ ನೀಡಲು ಮುಂದಾಗಬೇಕು ಎಂದು ಅವರು ಹೇಳಿದರು.

<><*<><>*><>

ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಪ್ರತಿಯೊಬ್ಬ ನಾಗರಿಕನ ಸಾಮಾಜಿಕ ಜವಾಬ್ದಾರಿಯಾಗಿದೆ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ ತಿಳಿಸಿದ್ದಾರೆ. ಸ್ವಚ್ಛ ಸರ್ವೇಕ್ಷಣ ಅಭಿಯಾನದ ಬಗ್ಗೆ ತರಬೇತಿ ನೀಡಿ ಸ್ವಚ್ಛತೆ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಮಾಡಲಾಗಿದೆ ಎಂದರು. ರಸ್ತೆಯ ಬದಿ ತ್ಯಾಜ್ಯ ಸುರಿಯಬಾರದು, ಮನೆಗಳಲ್ಲಿ ಹಸಿ, ಒಣ ಕಸವನ್ನು ವಿಂಗಡಿಸಬೇಕು ಮತ್ತು ಬಹಳ ಮುಖ್ಯವಾಗಿ ಪ್ಲಾಸ್ಟಿಕ್ ಅನ್ನು ಬಳಸಬಾರದು ಮನೆಯ ಮುಂಭಾಗದಲ್ಲಿ ಗಿಡಮರಗಳನ್ನು ಬಳಸಬೇಕು ಎಂದು ಹೇಳಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ  <>*><>